ದಿನಾಂಕ 09-04-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಒಂದು ದಿನ ನಾನು & ನನ್ನ ತಾಯಿ ಮೋ.ಸೈ. ನಲ್ಲಿ ಹೋಗುತ್ತಿದ್ದಾಗ ಯಾವುದೋ ಒಂದು ವಾಹನ ಬಂದು ಟಕ್ಕರ್ ಕೊಟ್ಟಿತ್ತು, ನನಗೆ ಎಚ್ಚರವಾದಾಗ ನಾನು ಆಸ್ಪತ್ರೆಯಲ್ಲಿದ್ದೆ. ಅಪಘಾತ ಆಗಿದ್ದು ಮಾತ್ರ ನನಗೆ ಗೊತ್ತು, ಆದರೆ ಹೇಗಾಯಿತು, ಯಾರಿಂದ ಅಪಘಾತ ಆಯಿತು ಎಂದು ನನಗೆ ಗೊತ್ತಿಲ್ಲ.

ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಸಾಕ್ಷಿಗೆ ನಿಪಿ-6 ನ್ನು ತೋರಿಸಲಾಗಿ, ಸಾಕ್ಷಿಯ ಸಹಿಯನ್ನು ನಿಪಿ-6 ಸಿ ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ದಿ.21-12-2024 ರಂದು ಮೋ.ಸೈ. ಕೆ ಎ 36/ಹೆಚ್ ಇ 1721 ರಲ್ಲಿ ನಾನು, ನನ್ನ ತಾಯಿ ಹುಸೇನಮ್ಮ ನನ್ನು ಕೂರಿಸಿಕೊಂಡು ಮ.1 ಗಂಟೆಯ ಸುಮಾರಿಗೆ ಸಿಂಧನೂರು ಕಡೆಯಿಂದ ಲಕ್ಷ್ಮೀ ಕ್ಯಾಂಪ್‌ನ ಗಣಪತಿ ಹೋಟೆಲ್ ನ ಬಳಿ ರಸ್ತೆಯ ಎಡಗಡೆ ಬರುತ್ತಿದ್ದಾಗ, ಆರೋಪಿತನು ತನ್ನ ಲಾರಿ ನಂ.ಕೆ ಎ 01/ಎಹೆಚ್-5875 ನ್ನು ಅತಿವೇಗ & ನಿರ್ಲಕ್ಷತನದಿಂದ ಚಲಾಯಿಸಿಕೊಂಡು ಬಂದು ನಮಗೆ ಟಕ್ಕರ್ ಕೊಟ್ಟಿದ್ದ, ಅದರಿಂದ ನನಗೆ & ನನ್ನ ತಾಯಿಗೆ ಗಾಯಗಳಾಗಿದ್ದು, ನನ್ನ ತಾಯಿ ಸದರಿ ಗಾಯಗಳಿಂದ ಮೃತಪಟ್ಟಿದ್ದರು ಎಂದರೆ ಸರಿಯಲ್ಲ. ಸದರಿ ಅಪಘಾತ ಆರೋಪಿಯ ತಪ್ಪಿನಿಂದಲೇ ಆಗಿತ್ತು ಎಂದರೆ ಸರಿಯಲ್ಲ.

ಪೋಲೀಸರು ದಿ.22-12-2024 ರಂದು ಬೆ.10 ರಿಂದ 11 ಗಂಟೆಯವರೆಗೆ ನೀವು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ನಿಪಿ-6 ರಂತೆ ಪಂಚನಾಮೆ ಮಾಡಿದ್ದರು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-13 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲು: ಆರೋಪಿ ಪರ ವಕೀಲರಿಂದ:-ಇಲ್ಲ.**

**ಮರು ವಿಚಾರಣೆ ಇಲ್ಲ:-**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿಂಧನೂರು.**